# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 08/2022 |
| ಸಿ.ಡಬ್ಲ್ಯೂ | : 02 |
| ಪಿ.ಡಬ್ಲ್ಯೂ | : 02 |
| ಸಾಕ್ಷಿಯ ಹೆಸರು | : ಗೌಸುದ್ದೀನ ದಿವಾನಸಾಬ ನಾಗನೂರು |
| ವಯಸ್ಸು | : 70 ವರ್ಷ |
| ಉದ್ಯೋಗ | : ಕಾರ್ಪೇಂಟರ್ |
| ವಾಸ ಸ್ಥಳ | : ನವಲಗುಂದ |

ದಿನಾಂಕಃ 01/08/2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಪ್ರಕರಣದ ಆರೋಪಿತರ ಪರಿಚಯವಿದೆ. ಚಾಸಾ-3 ರವರ ಪರಿಚಯ ಇಲ್ಲ. ಈ ಪ್ರಕರಣದ ಕುರಿತು ನನಗೆ ಏನು ಮಾಹಿತಿ ಇರುವದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವದೇ ಪಂಚನಾಮೆ ಮಾಡಿರುವುದಿಲ್ಲ. ಸಾಕ್ಷಿ ನೋಡಿ ಗುರುತಿಸಿದ ಪಂಚನಾಮೆಯನ್ನು **ನಿಪಿ-3** ಎಂದು ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ-3(ಎ)** ಎಂದು ಗುರುತಿಸಲಾಯಿತು. ಸದರಿ ನಿಪಿ-3 ರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ಪೋಲಿಸ ಠಾಣೆಯಲ್ಲಿ ಮಾಡಿರುತ್ತೇನೆ.

(ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿ ಕೊರಿದ್ದು ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರಿಂದ –</u>**

ದಿಃ 27-10-2016 ರಂದು ಬೆ.08-00 ರಿಂದ 09-00 ಗಂಟೆಯವರೆಗೆ ನವಲಗುಂದದ ಚಾಸಾ-1 ರವರ ಮನೆಯ ಮುಂದೆ ಚಾಸಾ-1 ಹಾಗೂ ಆರೋಪಿತರಿಗೂ ನಡೆದ ಜಗಳದ ಕುರಿತು ಚಾಸಾ-1 ರವರು ತೋರಿಸಿದ ಮೇರೆಗೆ ನನ್ನ ಹಾಗೂ ಚಾಸಾ-3 ರವರ ಸಮಕ್ಷಮ ಪಂಚನಾಮೆ ಮಾಡಿ, ಹಲ್ಲೆಗೆ ಉಪಯೋಗಿಸಿದ ಕಾಡು ಕಟ್ಟಿಗೆಯನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಶ್ರೀ ವಿ ಟಿ ಕೆ ವಕೀಲರಿಂದ</u>**

ಏನು ಇಲ್ಲಾ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**

**ನವಲಗುಂದ.**